# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 482(413+414+416+417) |
| **ಸದಸ್ಯರ ಹೆಸರು** | : | ಶ್ರೀ ಸುನೀಲ್‌ಗೌಡ.ಬಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸುವ ದಿನಾಂಕ** | : | 15-09-2022. |
| **ಉತ್ತರಿಸುವವರು** | : | ಸನ್ಮಾನ್ಯ ಮುಖ್ಯಮಂತ್ರಿಯವರು. |

| ಕ್ರ.ಸಂ. | ಪ್ರಶ್ನೆಗಳು | ಉತ್ತರ |
|---|---|---|
| (ಅ) | ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಮಾಸಿಕ ಗೌರವಧನ ಹೆಚ್ಚಳ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ ಮತ್ತು<br>ಯಾವ ಕಾಲಮಿತಿಯೊಳಗೆ ಗೌರವಧನವನ್ನು ಹೆಚ್ಚುಗೊಳಿಸಲಾಗುವುದು; | ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಮಾಸಿಕ ಗೌರವಧನ ಹೆಚ್ಚಳ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.<br>ಗೌರವಧನವನ್ನು ಪರಿಷ್ಕರಣೆ ಮಾಡಲು ನಿರ್ದಿಷ್ಟ ಕಾಲಮಿತಿಯನ್ನು ನಿಗದಿಪಡಿಸಿರುವುದಿಲ್ಲ. |
| (ಆ) | ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಮಾಸಿಕ ಗೌರವಧನ ಹೆಚ್ಚಿಸಲು ಅನುದಾನದ ಕೊರತೆ ಏನಾದರೂ ಇದೆಯೇ;(ವಿವರ ನೀಡುವುದು) ಇಲ್ಲದಿದ್ದಲ್ಲಿ, ಕಾರಣಗಳೇನು ;(ವಿವರ ನೀಡುವುದು); ಈ ಕುರಿತು ಸರ್ಕಾರಕ್ಕೆ ಇಚ್ಛಾಶಕ್ತಿಯ ಕೊರತೆ ಏನಾದರೂ ಇದೆಯೇ; ಇಲ್ಲದಿದ್ದಲ್ಲಿ ಸರ್ಕಾರದ ಸ್ಪಷ್ಟ ನಿಲುವೇನು; | ಮೇಲಿನ ಉತ್ತರದಿಂದಾಗಿ ಉದ್ಭವಿಸುವುದಿಲ್ಲ. |
| (ಇ) | ಗ್ರಾಮ ಪಂಚಾಯತಿ ಸದಸ್ಯರುಗಳಿಗೆ ಉಚಿತವಾಗಿ ಬಸ್ ಪಾಸ್ ವಿತರಣೆ ಮಾಡುವ ಬಗ್ಗೆ ಸರ್ಕಾರದ ನಿಲುವೇನು; ಬಸ್ ಪಾಸ್ ವಿತರಣೆ ಮಾಡುವ ಪ್ರಸ್ತಾವನೆ ಏನಾದರೂ ಸರ್ಕಾರದಲ್ಲಿ ಬಾಕಿ ಉಳಿದಿದೆಯೇ; ಇದ್ದಲ್ಲಿ ಯಾವ ಹಂತದಲ್ಲಿದೆ; | ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ಗ್ರಾಮ ಪಂಚಾಯತಿ ಕೆಲಸಗಳ ನಿಮಿತ್ತ ಗ್ರಾಮ ಪಂಚಾಯತಿ ಪರಿಮಿತಿಗಳಾಚೆ ಮಾಡಿದ ಪ್ರಯಾಣಗಳಿಗಾಗಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ) ನಿಯಮಗಳು, 1994 ರನ್ವಯ ಪ್ರಯಾಣ ಭತ್ಯೆ ಹಾಗೂ ದಿನ ಭತ್ಯೆಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. |

| | | |
|---|---|---|
| (ಈ) | ಗ್ರಾಮ ಪಂಚಾಯತ್ ಅಧ್ಯಕ್ಷರಿಗೆ ಮಾಸಿಕ ರೂ.5000/-, ಉಪಾಧ್ಯಕ್ಷರಿಗೆ ರೂ.4000/- ಹಾಗೂ ಸದಸ್ಯರುಗಳಿಗೆ ರೂ.3000/- ಗೌರವಧನವನ್ನು ನೀಡುವ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು?(ಪೂರ್ಣ ವಿವರ ನೀಡುವುದು) | ಉಪ ಪ್ರಶ್ನೆ ಸಂಖ್ಯೆ(ಅ)ದ ಉತ್ತರದಿಂದ ಉದ್ಭವಿಸುವುದಿಲ್ಲ |

**ಸಂಖ್ಯೆ: ಗ್ರಾಅಪಂರಾ 413 ಜಿಪಸ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿಗಳು